# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

| ಸಂಪುಟ –೧೬೧<br>Volume - 161 | ಬೆಂಗಳೂರು, ಮಂಗಳವಾರ, ೧೫, ಸೆಪ್ಟೆಂಬರ್, ೨೦೨೬ (ಭಾದ್ರಪದ ೨೪, ಶಕವರ್ಷ, ೧೯೪೮)<br>BENGALURU, TUESDAY, 15 SEPTEMBER, 2026 ( BHADRAPADA 24, SHAKAVARSHA, 1948) | ಸಂಚಿಕೆ ೧೭೮<br>Issue 178 |
|---|---|---|


## ಭಾಗ ೧

## ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

### <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಅಳವಡಿಸಿಕೊಳ್ಳಲು ಉದ್ದೇಶಿಸಿರುವ GIS ಆಧಾರಿತ ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳಿಗೆ (Road Network Grid Plan) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ13(1) ರಡಿಯಲ್ಲಿ ಸರ್ಕಾರದಿಂದ ತಾತ್ಕಾಲಿಕ ಅನುಮೋದನೆ ನೀಡುವ ಕುರಿತು.

ಉಲ್ಲೇಖ:
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 11.05.2025 ಮತ್ತು 18.05.2025 ರಂದು ನಡೆದ ಸಭೆಯ ನಡಾವಳಿಗಳು.
2. ಸರ್ಕಾರದ ಆದೇಶ ಸಂಖ್ಯೆ: ನಅಇ 504 ಬೆಂಆಸೇ 2004, ದಿನಾಂಕ 25.06.2007.
3. ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ರವರ ಪತ್ರ ಸಂಖ್ಯೆ: ಮು.ಆ/ಜಿಬಿಎ/ಪಿಆರ್/304/2026-27, ದಿನಾಂಕ 07.09.2026.

********

**<u>ಪ್ರಸ್ತಾವನೆ</u>**

ಮೇಲೆ ಓದಲಾದ ಉಲ್ಲೇಖ (1) ರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಗಳಲ್ಲಿ ಗ್ರೇಟರ್ ಬೆಂಗಳೂರು ಸ್ಥಳೀಯ ಯೋಜನಾ ಪ್ರದೇಶಕ್ಕೆ Mobility Plan ಸಿದ್ಧಪಡಿಸುವಂತೆ ಸೂಚಿಸಲಾಗಿರುತ್ತದೆ.

ಮೇಲೆ ಓದಲಾದ ಉಲ್ಲೇಖ (2) ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರಡಿ ಬೆಂಗಳೂರು ಸ್ಥಳೀಯ ಯೋಜನಾ ಪ್ರದೇಶದ ಪರಿಷ್ಕೃತ ಮಹಾಯೋಜನೆ-2015 ಗೆ ಅಂತಿಮ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಉಲ್ಲೇಖ (3) ರಲ್ಲಿ ಪ್ರಸ್ತುತ ಜಾರಿಯಲ್ಲಿರುವ ಮಹಾಯೋಜನೆಯಲ್ಲಿನ ಹಾಲಿ ರಸ್ತೆ ಜಾಲಕ್ಕೆ ಪೂರಕವಾಗಿ, ಬೆಂಗಳೂರು ನಗರದ ಭವಿಷ್ಯದ ಬೆಳವಣಿಗೆ, ಸಂಚಾರ ದಟ್ಟಣೆ ನಿವಾರಣೆ, ಸಂಪರ್ಕ ವ್ಯವಸ್ಥೆಯ ಸುಧಾರಣೆ ಹಾಗೂ ಕೈಗಾರಿಕೆ ಮತ್ತು ವಾಣಿಜ್ಯ ಚಟುವಟಿಕೆಗಳ ವಿಸ್ತರಣೆಗೆ ಅನುಕೂಲವಾಗುವಂತೆ ಅಗತ್ಯವಿರುವ ಜಾಗಗಳಲ್ಲಿ ಹೆಚ್ಚುವರಿಯಾಗಿ ಹಾಲಿ ಇರುವ ರಸ್ತೆಗಳನ್ನು ಪರಿಗಣಿಸಿ ಪ್ರಸ್ತಾಪಿಸಿರುವ ವಿವಿಧ ಅಗಲಗಳ ರಸ್ತೆಗಳನ್ನು ಒಳಗೊಂಡಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12(1) (ಬಿ) ರನ್ವಯ ಕ್ರಮವಹಿಸಿ ರಸ್ತೆ

ಪರಿಚಲನಾ ಜಾಲದ (Road Network Grid Plan) ನಕ್ಷೆಗಳನ್ನು ತಯಾರಿಸಿರುವುದಾಗಿ ವರದಿ ನೀಡಲಾಗಿದೆ ಹಾಗೂ ಅದರಂತೆ ತಯಾರಿಸಿರುವ ನಕ್ಷೆಗಳನ್ನು ಪರಿಷ್ಕೃತ ಮಹಾಯೋಜನೆಯಲ್ಲಿ (RMP-2015) ಅಳವಡಿಸಿಕೊಳ್ಳಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ನಅಇ 597 ಎಂಎನ್‌ಜೆ 2026(ಇ), ದಿನಾಂಕ:09.09.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಅಳವಡಿಸಲು ಪ್ರಸ್ತಾಪಿಸಲಾದ GIS ಆಧಾರಿತ ರಸ್ತೆ ಪರಿಚಲನಾ ಜಾಲವನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 12(1)(ಬಿ) ರನ್ವಯ ಅಳವಡಿಸಿಕೊಳ್ಳಲು ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1) ರನ್ವಯ ಈ ಕೆಳಕಂಡ ಷರತ್ತುಗಳಿಗೊಳಪಟ್ಟು, ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

1. ಪ್ರಸ್ತಾಪಿಸಿರುವ ರಸ್ತೆ ಪರಿಚಲನೆಯು ಚಾಲ್ತಿಯಲ್ಲಿರುವ ಅನುಮೋದಿತ ಮಹಾಯೋಜನೆಯ (RMP-2015) ಹಾಲಿ ಮತ್ತು ಪ್ರಸ್ತಾಪಿತ ರಸ್ತೆಗಳೊಂದಿಗೆ ಯೋಜನಾಬದ್ಧವಾಗಿ ಜೋಡಣೆಯಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.
2. ಪ್ರಸ್ತಾಪಿಸಲಾದ ರಸ್ತೆ ಪರಿಚಲನೆಯು ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿ ಹೊಂದಿಕೊಂಡಂತೆ ಇರುವ ಇತರೆ ಯೋಜನಾ ಪ್ರಾಧಿಕಾರಗಳ (ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಮೈಸೂರು-ಇನ್‌ಫ್ರಾಸ್ಟ್ರಕ್ಚರ್ ಪ್ರದೇಶ ಯೋಜನಾ ಪ್ರಾಧಿಕಾರ) ಪ್ರಸ್ತಾಪಿತ ರಸ್ತೆ ಜಾಲಗಳೊಂದಿಗೆ ಹೊಂದಾಣಿಕೆಯಾಗುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.
3. ಸದರಿ ಪ್ರಸ್ತಾವನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆ ಪಡೆದು ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಅಭಿವೃದ್ಧಿಗಳಿಗೆ ಅನುಮತಿಸುವಾಗ ಪ್ರಸ್ತಾಪಿತ ರಸ್ತೆ ಜಾಲವನ್ನು ಅಳವಡಿಸಿಕೊಂಡು ಅನುಮೋದನೆಗಳನ್ನು ನೀಡತಕ್ಕದ್ದು.

ಪ್ರಸ್ತಾಪಿತ ರಸ್ತೆ ಪರಿಚಲನಾ ನಕ್ಷೆಗಳಿಗೆ ಅನುಮೋದನೆ ನೀಡಿದ ಗುರುತಾಗಿ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1)(2) ರನ್ವಯ ಕ್ರಮ ಕೈಗೊಂಡು ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳನ್ನು ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಜೇಶ್ ಎಸ್. ಸೂಳಿಕೇರಿ)
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ.
(ಬಿಡಿಎ ಮತ್ತು ಬೆಂ-1)

**PR-328**